## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದಿನಾಂಕ:28.07.2016ರಂದು ನಡೆದ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ ಸಭೆಯಲ್ಲಿ ಅನುಮೋದನೆಯಾದ 11 ಕುಡಿಯುವ ನೀರಿನ ಯೋಜನೆಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ದಿನಾಂಕ:28.07.2016ರ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ (SLSSC) ಸಭೆಯ ನಡವಳಿಗಳು.
2. ಮುಖ್ಯ ಇಂಜಿನಿಯರ್, RDWSD ರವರ ಕಡತ ಸಂಖ್ಯೆ: ಗ್ರಾಅಪ/1065/ಗ್ರಾಕುನೀ&ನೈಇ/2016-17

**ಪೀಠಿಕೆ:**

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ವಿವಿಧ ರೀತಿಯ ಗುಣಮಟ್ಟದ ಸಮಸ್ಯೆಯಿರುವ ಜನವಸತಿಗಳಿಗೆ ಪರ್ಯಾಯ ಜಲಮೂಲ ಆಧರಿಸಿ ಶಾಶ್ವತ ಹಾಗೂ ಸುರಕ್ಷಿತ ಕುಡಿಯುವ ನೀರು ಪೂರೈಕೆ ಮಾಡುವ ಸಲುವಾಗಿ ದಿನಾಂಕ:28.07.2016ರಂದು ನಡೆದ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ ಸಭೆ (SLSSC)ಯಲ್ಲಿ ಅನುಮೋದನೆ ನೀಡಲಾದ ಉಡುಪಿ, ಹಾಸನ, ರಾಯಚೂರು ಮತ್ತು ತುಮಕೂರು ಜಿಲ್ಲೆಗಳ, O&M ವೆಚ್ಚ ಸೇರಿದಂತೆ ರೂ.65.364ಕೋಟಿ ಅಂದಾಜು ಮೊತ್ತದ 11 ಯೋಜನೆಗಳನ್ನು ಆದ್ಯತೆ ಮೇಲೆ ಅನುಷ್ಠಾನಗೊಳಿಸುವ ಅಗತ್ಯತೆಯಿದೆ. ಮೇಲೆ(2)ರಲ್ಲಿ ಓದಲಾದ ಕಡತದಲ್ಲಿ CE, RDWSD ರವರು ಈ 11 ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಪ್ರಸ್ತಾವನೆ ಸಲ್ಲಿಸಿದ್ದಾರೆ. ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಉಡುಪಿ, ಹಾಸನ, ರಾಯಚೂರು ಮತ್ತು ತುಮಕೂರು ಜಿಲ್ಲಾ ಪಂಚಾಯತಿಗಳು ಹಾಗೂ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮುಂದಿನ ಪ್ರಕ್ರಿಯೆ ಅನುಸರಿಸಲನುವಾಗುವಂತೆ NRDWP (Coverage & WQ) ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 71 ಗ್ರಾನೀಸ(5) 2016 ಬೆಂಗಳೂರು, ದಿನಾಂಕ:17.12.2016**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ದಿನಾಂಕ:28.07.2016ರ SLSSC ಸಭೆಯಲ್ಲಿ ತಾತ್ವಿಕ ಒಪ್ಪಿಗೆ ಪಡೆದಿರುವ ಉಡುಪಿ, ಹಾಸನ, ರಾಯಚೂರು ಮತ್ತು ತುಮಕೂರು ಜಿಲ್ಲೆಗಳಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು **ರೂ.6536.44ಲಕ್ಷ (ಆರು ಸಾವಿರದ ಐದುನೂರ ಮೂವತ್ತಾರು ಲಕ್ಷದ ನಲವತ್ತ್ನಾಲ್ಕು ಸಾವಿರ ರೂಪಾಯಿಗಳು ಮಾತ್ರ)** ಗಳ ಅಂದಾಜಿನ (O&M ಬಾಬ್ತು ಸೇರಿದಂತೆ) **ಅನುಬಂಧದಲ್ಲಿ** ಹೇಳಿರುವ **11** ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳಿಗೆ ಈ ಆದೇಶಕ್ಕೆ ಲಗತ್ತಿಸಿರುವ ಅಂದಾಜು ಘೋಷ್ವಾರೆಯನ್ವಯ NRDWP (Coverage & WQ) ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ:

(ಅ) ಅನುಮೋದಿತ ಕುಡಿಯುವ ನೀರಿನ ಕಾರ್ಯಕ್ರಮದ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಆ) ಗುತ್ತಿಗೆದಾರರು ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ 5 ವರ್ಷಗಳ ಕಾಲ ಸದರಿ ಯೋಜನೆಗಳ ಸಂಪೂರ್ಣ ನಿರ್ವಹಣೆ ಮತ್ತು ಕಾರ್ಯಾಚರಣೆಯನ್ನು ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. 2016-17ರ ಸಾಲಿನಲ್ಲಿ IMISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಯನ್ನು ಅನುಷ್ಠಾನಗೊಳಿಸಬೇಕು.

(ಈ) ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು ಮತ್ತು ಯೋಜನೆಯ ಅನುಷ್ಠಾನವನ್ನು ಕಡ್ಡಾಯವಾಗಿ ಸರ್ಕಾರದಿಂದ ಅನುಮೋದನೆಯಾಗಿರುವ ಸಂಸ್ಥೆ ಮೂಲಕ 3rd Party Inspectionಗೆ ಒಳಪಡಿಸುವುದು.

(ಉ) ಈ ಯೋಜನೆಯ ಬಂಡವಾಳ ಹೂಡಿಕೆ (DBOT ಪದ್ಧತಿ ಹೊರತಾದ ಯೋಜನೆಗಳಿಗೆ) ಕೇಂದ್ರ ಮತ್ತು ರಾಜ್ಯ ವಲಯದ NRDWP ಯೋಜನೆಯಡಿ ಕ್ರಮವಾಗಿ 50:50 ಅನುಪಾತದಲ್ಲಿರುತ್ತದೆ.

(ಊ) ಈ ಯೋಜನೆಗೆ ತಗಲುವ ಅನುಮೋದಿತ ಅಂದಾಜು ವೆಚ್ಚದ ವ್ಯಾಪ್ತಿಯೊಳಗೆ ಗುತ್ತಿಗೆ ನೀಡಿದ 18 ತಿಂಗಳೊಳಗಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಯೋಜನೆಯನ್ನು ಕಾರ್ಯಗತಗೊಳಿಸತಕ್ಕದ್ದು. ಈಗ ಅನುಮೋದನೆಯಾದ ಕ್ರಿಯಾ ಯೋಜನೆಯ ಅಂದಾಜು ವೆಚ್ಚದಲ್ಲಿ ಹೆಚ್ಚಳವಾಗದಂತೆ ಎಲ್ಲಾ ಆಡಳಿತಾತ್ಮಕ ಹಾಗೂ ತಾಂತ್ರಿಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

(ಋ) Bulk Water meter ಹಾಗೂ House hold metering ವ್ಯವಸ್ಥೆಯನ್ನು MVS ಯೋಜನೆಗಳಿರುವೆಡೆ ಕಡ್ಡಾಯವಾಗಿ ಮಾಡಬೇಕು. ಆಯಾ ಗ್ರಾಮ ಪಂಚಾಯತಿ ಸದರಿ ಆಧಾರದ ಮೇಲೆ ಹೊರಗುತ್ತಿಗೆ ಸಂಸ್ಥೆಗೆ/ಸರ್ಕಾರಕ್ಕೆ ನೀರು ಬಳಕೆ ಆಧಾರದ ಮೇಲೆ ನೀರಿನ ಕರ ಪಾವತಿಸಬೇಕು.

(ಎ) ಯೋಜನೆಗಳು ಅನುಷ್ಠಾನಗೊಂಡ ನಂತರ ಅವುಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಹೊರಗುತ್ತಿಗೆ ಆಧಾರದ ಮೇಲೆ (ಆದೇಶ ಸಂಖ್ಯೆ:ಗ್ರಾಅಪ 12 ಗ್ರಾನೀಸ(4) 2011(ಭಾ) ದಿನಾಂಕ:12.03.2013)ಮಾಡಿಸಬೇಕು ಹಾಗೂ ಗ್ರಾಮಗಳ ಆಂತರಿಕ ಸರಬರಾಜು ವ್ಯವಸ್ಥೆಯನ್ನು ಸ್ಥಳೀಯ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ (VWSSC)/ ಸಂಬಂಧಿಸಿದ ಗ್ರಾಮ ಪಂಚಾಯತ್ / ಪಾರದರ್ಶಕ ನೀತಿಯನ್ವಯ ಆಯ್ಕೆ ಮಾಡಿದ ಸರ್ಕಾರೇತರ ಸಂಸ್ಥೆ / ಸಂಬಂಧಪಟ್ಟ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು.

(ಏ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 128 ಗ್ರಾನೀಸ(4)13 ದಿನಾಂಕ:29.08.2013ರನ್ವಯ ಸಂಗ್ರಹಿಸುವುದು.

(ಐ) ನೀರೆತ್ತುವ ಪ್ರಮಾಣವನ್ನು ಸೂಕ್ತ ರೀತಿಯಲ್ಲಿ ಅಳತೆ ಮಾಡುವ ಸಲುವಾಗಿ ಅಗತ್ಯ ಮಾಪಕವನ್ನು ನದಿಯ ಹತ್ತಿರ / ಜಲಾಶಯದ ಬಳಿ ಅಳವಡಿಸಿಕೊಳ್ಳತಕ್ಕದ್ದು ಹಾಗೂ ತತ್ಸಂಬಂಧದ ಬಾಬ್ತಿನ ವೆಚ್ಚವನ್ನು ಸ್ಥಳೀಯ ಪಂಚಾಯತ್ ಭರಿಸಬೇಕು.

3. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ IFA ರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ 222 ಎಎಫ್ಎನ್ 2016, ದಿನಾಂಕ:01.04.2016ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ ಬೆಂ.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ- ಹಾಗೂ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂ
9. ವಿಶೇಷಾಧಿಕಾರಿಗಳು (ಜಿಪಂ)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು,ಆರ್ಥಿಕ ಇಲಾಖೆ, ವಿಧಾನಸೌಧ ಬೆಂ.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
11. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, ಕೆಹೆಚ್‌ಬಿ ಕಾಂಪ್ಲೆಕ್ಸ್, ಕಾವೇರಿ ಭವನ, ಬೆಂಗಳೂರು.-09.
12. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಉಡುಪಿ, ಹಾಸನ, ರಾಯಚೂರು ಮತ್ತು ತುಮಕೂರು.**
13. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್, **ಉಡುಪಿ, ಹಾಸನ, ರಾಯಚೂರು ಮತ್ತು ತುಮಕೂರು.**
14. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ ಕಛೇರಿ, **ಬೆಂಗಳೂರು, ಮೈಸೂರು ಮತ್ತು ಬಳ್ಳಾರಿ.**
15. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, **ಉಡುಪಿ, ಹಾಸನ, ರಾಯಚೂರು ಮತ್ತು ತುಮಕೂರು.**
16. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ ಕಾವೇರಿ ಭವನ, ಬೆಂ.
17. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
18. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ
19. ಆಯುಕ್ತರು, ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ / ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ, ಇವರುಗಳ ಆಪ್ತ ಸಹಾಯಕರು
20. ಮ್ಯಾನೇಜರ್ ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂರಸ್ತೆ, ಬೆಂಗಳೂರು
21. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು
22. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5ಪ್ರತಿಗಳು)
23. ರಾಜ್ಯ ಪತ್ರಾಗಾರ ಇಲಾಖೆ(ಬಿಡಿ ಪ್ರತಿ ಶಾಖೆ).
24. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ-10ಪ್ರತಿಗಳು.
25. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

## ಅನುಬಂಧ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 71 ಗ್ರಾನೀಸ(5) 2016 ದಿನಾಂಕ:17.12.2016ರ ಲಗತ್ತು**

| ಕ್ರ.ಸ | ಜಿಲ್ಲೆ | ಯೋಜನೆ | ಆವರಿಸಲ್ಪಡುವ ಜನವಸತಿಗಳು | ಅಂದಾಜು ಮೊತ್ತ (O&M) ವೆಚ್ಚ ಸೇರಿದಂತೆ (ರೂ.ಲಕ್ಷಗಳಲ್ಲಿ) |
|---|---|---|---|---|
| 1 | ಉಡುಪಿ | ಕಾರ್ಕಳ ತಾಲ್ಲೂಕಿನ ನಿಟ್ಟೆ ಮತ್ತು ಇತರೆ ಹ್ಯಾಮ್ಲೆಟ್ಸ್ (ಹಂತ-2)ಗಳಿಗೆ ಕುಡಿಯುವ ನೀರು ಸರಬರಾಜು ಯೋಜನೆ | 31 | 345.00 |
| 2 | | ಕಾರ್ಕಳ ತಾಲ್ಲೂಕಿನ ಹೆಬ್ರಿ ಮತ್ತು ಇತರೆ 3 ಗ್ರಾಮಗಳಿಗೆ (ಹಂತ-2) ಕುಡಿಯುವ ನೀರು ಸರಬರಾಜು ಯೋಜನೆ | 138 | 500.00 |
| 3 | ಹಾಸನ | ಹೊಳೇನರಸೀಪುರ ತಾಲ್ಲೂಕಿನ ಕಳ್ಳಿಕೊಪ್ಪಲು ಮತ್ತು ಇತರೆ 10 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 11 | 719.31 |
| 4 | | ಹೊಳೇನರಸೀಪುರ ತಾಲ್ಲೂಕಿನ ಗುಲಗಂಜಿಹಳ್ಳಿ ಮತ್ತು ಇತರೆ 7 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 8 | 820.32 |
| 5 | ರಾಯಚೂರು | ರಾಯಚೂರು ತಾಲ್ಲೂಕಿನ ಕಲ್ಮಲಾ ಮತ್ತು ಇತರೆ 5 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 6 | 850.00 |
| 6 | ತುಮಕೂರು | ತಿಪಟೂರು ತಾಲ್ಲೂಕಿನ ಬಳ್ಳಿಗೆರೆ ಮತ್ತು ಇತರೆ 12 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 13 | 696.12 |
| 7 | | ತಿಪಟೂರು ತಾಲ್ಲೂಕಿನ ಹೊನ್ನವಳ್ಳಿ ಮತ್ತು ಇತರೆ 14 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 15 | 774.08 |
| 8 | | ತಿಪಟೂರು ತಾಲ್ಲೂಕಿನ ಗುಂಗುರಮಳೆ ಮತ್ತು ಇತರೆ 7 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 8 | 441.41 |
| 9 | | ತಿಪಟೂರು ತಾಲ್ಲೂಕಿನ ಆಲದಹಳ್ಳಿ ಮತ್ತು ಇತರೆ 5 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 6 | 290.00 |
| 10 | | ತುಮಕೂರು ತಾಲ್ಲೂಕಿನ ಬ್ರಹ್ಮಸಂದ್ರ ಮತ್ತು ಇತರೆ 10 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 11 | 629.52 |
| 11 | | ತುಮಕೂರು ತಾಲ್ಲೂಕಿನ ದೊಡ್ಡಕೊರಟಗೆರೆ ಮತ್ತು ಇತರೆ 10 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ | 11 | 470.68 |
| | | ಒಟ್ಟು | **258** | **6536.44** |

ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ